ರಾಜ್ಯದಲ್ಲಿ ಅತೀವೃಷ್ಟಿ ಹಾಗೂ ಅನಾವೃಷ್ಟಿಯಿಂದ ಬೆಳೆನಾಶ.

2532(2046)

ಶ್ರೀ ಜಗದೀಶ್ ಶೆಟ್ಟರ್(ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಕಂದಾಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ಬೆಳೆನಾಶ ಹಾನಿ ಕುರಿತು ಕರ್ನಾಟಕ ಸರ್ಕಾರ ಕೇಂದ್ರಕ್ಕೆ ವರದಿ ಸಲ್ಲಿಸಲು ವಿಳಂಬ ಮಾಡಿದ್ದು ನಿಜವೆ?

ಆ) ಕೇಂದ್ರಕ್ಕೆ ಅತಿವೃಷ್ಟಿ ಅನಾವೃಷ್ಟಿ ಪರಿಹಾರಕ್ಕಾಗಿ ಮನವಿ ಸಲ್ಲಿಸಲು ವಿಳಂಬ ಮಾಡಿದ್ದರಿಂದ ರಾಜ್ಯಕ್ಕೆ ಕೇಂದ್ರದಿಂದ ನೆರವು ಸಿಗದೇ ಇರುವುದು ನಿಜವೇ?

ಇ) 1999-2000 ಸಾಲಿನಲ್ಲಿ ಕರ್ನಾಟಕಕ್ಕೆ ನೈಸರ್ಗಿಕ ಪ್ರಕೋಪ ಪರಿಹಾರ ನಿಧಿಯ ಕೇಂದ್ರದ ಪಾಲಿನ ಎಷ್ಟು ಹಣವನ್ನು ರಾಜ್ಯಕ್ಕೆ ಬಿಡುಗಡೆ ಮಾಡಿದೆ?

ಶ್ರೀ ಹೆಚ್.ಸಿ.ಶ್ರೀಕಂಠಯ್ಯ (ಕಂದಾಯ ಸಚಿವರು):

ಅ) ಇಲ್ಲ. ಸಕಾಲದಲ್ಲೇ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ.

ಆ) ಇಲ್ಲ. 1999-2000ರ ಸಾಲಿಗೆ ಕೇಂದ್ರ ಸರ್ಕಾರದಿಂದ ಹೆಚ್ಚುವರಿಯಾಗಿ ರೂ. 1709.00 ಲಕ್ಷಗಳ ನೆರವು ನೀಡಲಾಗಿದೆ.

ಇ) ಕೇಂದ್ರದ ಪಾಲಿನ ಹಣ ರೂ. 3629.00 ಲಕ್ಷಗಳು.

ರಾಜ್ಯದಲ್ಲಿ ರೈತರಿಗೆ ಕಳಪೆ ಬೀಜ ವಿತರಿಸಿರುವ ಪ್ರಕರಣಗಳು:

2533(2047)

ಶ್ರೀ ಜಗದೀಶ್ ಶೆಟ್ಟರ್(ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1999-2000ನೇ ಸಾಲಿನಲ್ಲಿ ರೈತರಿಗೆ ಕಳಪೆ ಬೀಜ ವಿತರಿಸಿರುವ ಎಷ್ಟು ಪ್ರಕರಣಗಳು ರಾಜ್ಯದಲ್ಲಿ ವರದಿಯಾಗಿದೆ (ವಿವರ ನೀಡಿ)

ಆ) ಯಾವ ಯಾವ ಕಂಪನಿಗಳ ಇಂಥ ಕಳಪೆ ಬೀಜ ಮಾರಾಟ ಮಾಡಿದೆ?

ಇ) ಇದರಿಂದ ಉಂಟಾಗಿರುವ ನಷ್ಟವನ್ನು ಸಂಬಂಧ ಪಟ್ಟ ಕಂಪನಿಗಳಿಂದ